ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬಿ. ಎಂ. ಆರ್. ಸಿ. ಎಲ್. ನಲ್ಲಿ ಗುತ್ತಿಗೆ ನೌಕರರ ನೇಮಕಾತಿ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ) –

431 (546) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (BMRCL) ದಲ್ಲಿ ಹಾಲಿ ಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು; (ಉದ್ಯೋಗಿಗಳ ಹೆಸರು, ಹುದ್ದೆ, ಮಾಸಿಕ ಪಡೆಯುತ್ತಿರುವ ವೇತನ ಸೇವೆಗೆ ಸೇರಿದ ದಿನಾಂಕದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರಲ್ಲಿ ಕರ್ನಾಟಕದವರೆಷ್ಟು; ಬೇರೆ ರಾಜ್ಯದವರೆಷ್ಟು; (ಹೆಸರು ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಮೆಟ್ರೋ ನಿಗಮಕ್ಕೆ ಸಾವಿರಾರು ಗುತ್ತಿಗೆ ನೌಕರರನ್ನು ಯಾವ ಮಾನದಂಡದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ; ದಿನಪತ್ರಿಕೆಯಲ್ಲಿ ಜಾಹೀರಾತು ನೀಡಿ ನೇಮಕ ಮಾಡಿಕೊಳ್ಳಾಗಿದೆಯೇ; (ಮಾಹಿತಿ ನೀಡುವುದು)

(ಈ) ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದ ಯಾವ ಅಭ್ಯರ್ಥಿಗಳಿಗೂ ಕೆಲಸ ನೀಡದೆ ಅಧಿಕಾರಿಗಳು ತಮ್ಮ ಮನಸ್ಸಿಗೆ ಬಂದಂತೆ ಗುತ್ತಿಗೆ ನೌಕರರನ್ನು ನೇಮಕಾತಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೇಮಕಗೊಂಡ ಗುತ್ತಿಗೆ ನೌಕರರಲ್ಲಿ ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದವರೆಷ್ಟು; ಅಧಿಕಾರಿಗಳು ನೇರವಾಗಿ ನೇಮಕ ಮಾಡಿಕೊಂಡವರೆಷ್ಟು;

(ಉ) ಕನ್ನಡಿಗ ಅಭ್ಯರ್ಥಿಗಳಿಗೆ ಅನ್ಯಾಯ ಮಾಡಿದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ?